# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:** | 776 |
| **ಮಾನ್ಯ ಸದಸ್ಯರ ಹೆಸರು:** | ಡಾ\|\| ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ:** | 18.08.2025 |
| **ಉತ್ತರಿಸುವ ಸಚಿವರು** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ನಂಜನಗೂಡು ತಾಲ್ಲೂಕು ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ಅನ್ನು ಆರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ ವಿವರ ಒದಗಿಸುವುದು; | ನಂಜನಗೂಡು ತಾಲ್ಲೂಕು ಆಸ್ಪತ್ರೆಯಲ್ಲಿ ಟ್ರಮಾ ಕೇರ್ ಸೇವೆಗಳನ್ನು ಆರಂಭಿಸುವ ಉದ್ದೇಶವಿದೆ. ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಆಸ್ಪತ್ರೆಗಳನ್ನು ರಾಷ್ಟ್ರೀಯ ಅಪಘಾತ ಮತ್ತು ಸುಟ್ಟಗಾಯಗಳ ಕಾರ್ಯಕ್ರಮದಡಿಯಲ್ಲಿ ಬಲಗೊಳಿಸಲು ರೂ. 10.00 ಕೋಟಿಗಳ ಕ್ರಿಯಾ ಯೋಜನೆಗೆ ಆದೇಶ ಸಂಖ್ಯೆ: ಆಕುಕ 413 ಸಿಜಿಇ 2024, ದಿನಾಂಕ: 28.08.2024 ರಲ್ಲಿ ಅನುಮೋದನೆ ನೀಡಲಾಗಿದೆ.<br><br>ದಿನಾಂಕ: 19.03.2025 ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಸ್ತೆ ಸುರಕ್ಷತಾ ಪ್ರಾಧಿಕಾರದ ಸಭೆಯು ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ. ಇದರಲ್ಲಿ ನಂಜನಗೂಡು ತಾಲ್ಲೂಕು ಆಸ್ಪತ್ರೆಗೆ ಅಗತ್ಯವಿರುವ ಉಪಕರಣಗಳನ್ನು ಸಹ ಪ್ರಸ್ತಾಪಿಸಲಾಗಿದೆ. |
| ಆ | ಈ ತಾಲ್ಲೂಕು ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್‌ನ್ನು ಸ್ಥಾಪಿಸಲು ಜಾಗದ ಅವಶ್ಯಕತೆಯಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಕೇಂದ್ರ ಸರ್ಕಾರದ ರಾಷ್ಟ್ರೀಯ ಅಪಘಾತ ಮತ್ತು ಸುಟ್ಟ ಗಾಯಗಳ ತಡೆಗಟ್ಟುವಿಕೆ ಮತ್ತು ನಿರ್ವಹಣಾ ಕಾರ್ಯಕ್ರಮದ ಮಾರ್ಗಸೂಚಿಯನ್ವಯ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿನ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ವಿಭಾಗವನ್ನು ಮೇಲ್ದರ್ಜೆಗೇರಿಸಿ ಅಪಘಾತಕ್ಕೆ ಒಳಗಾದ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡುವುದು ಹಾಗೂ ಅವಶ್ಯಕವಿದ್ದಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಮೇಲ್ದರ್ಜೆಯ ಆಸ್ಪತ್ರೆಗಳಿಗೆ ತುರ್ತು |

| | | |
|---|---|---|
| | | ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಬೇಕಾಗಿರುತ್ತದೆ. ಪ್ರತ್ಯೇಕ ಟ್ರಾಮಾ ಕೇರ್ ಸೆಂಟರ್‌ಗಳನ್ನು ಕಲ್ಪಿಸಬೇಕೆಂಬ ನಿಯಮವು ಮಾರ್ಗಸೂಚಿಯಲ್ಲಿ ಇಲ್ಲದಿರುವುದರಿಂದ ಟ್ರಾಮಾ ಕೇರ್ ಸೆಂಟರ್ ಸ್ಥಾಪಿಸಲು ಜಾಗದ ಅವಶ್ಯಕತೆ ಇರುವುದಿಲ್ಲ.<br>ರಾಷ್ಟ್ರೀಯ ಅಪಘಾತ ಮತ್ತು ಸುಟ್ಟ ಗಾಯಗಳ ತಡೆಗಟ್ಟುವಿಕೆ ಮತ್ತು ನಿರ್ವಹಣಾ ಕಾರ್ಯಕ್ರಮದ ಮಾರ್ಗಸೂಚಿಯನ್ನು ಕೇಂದ್ರ ಸರ್ಕಾರ ಈ ಕೆಳಕಂಡ ವೆಬ್‌ಸೈಟ್ ಲಿಂಕ್ ಮೂಲಕ ಪಡೆಯಬಹುದಾಗಿದೆ.<br>https://nhm.gov.in/index1.php?lang=1&level=2&sublinkid=1050&lid=610 |

**ಆಕುಕ 89 ಎಸ್‌ಬಿವಿ 2025**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**